ನಾನು ನಿನಗೆ ಉಪದೇಶ ಮಾಡುತ್ತಿದ್ದೇನೆ. ಎಲ್ಲಾ ನಮಾಝ್ಗಳ ನಂತರ ಹೀಗೆ ಹೇಳುವುದನ್ನು ಬಿಟ್ಟುಬಿಡಬೇಡ: ಓ ಅಲ್ಲಾಹ್! ನಿನ್ನನ್ನು ಸ್ಮರಿಸಲು, ನಿನಗೆ ಕೃತಜ್ಞತೆ ಸಲ್ಲಿಸಲು ಮತ್ತು ಉತ್ತಮವಾದ ರೀತಿಯಲ್ಲಿ ನಿನ್ನ ಆರಾಧನೆ ಮಾಡಲು ನನಗೆ ಸಹಾಯ ಮಾಡು

ಮುಆದ್ ಬಿನ್ ಜಬಲ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಅವರ ಕೈ ಹಿಡಿದು ಹೇಳಿದರು:
"ಓ ಮುಆದ್, ಅಲ್ಲಾಹನಾಣೆ! ಖಂಡಿತವಾಗಿಯೂ ನಾನು ನಿನ್ನನ್ನು ಪ್ರೀತಿಸುತ್ತೇನೆ." ನಂತರ ಅವರು ಹೇಳಿದರು: "ಓ ಮುಆದ್, ನಾನು ನಿನಗೆ ಉಪದೇಶ ಮಾಡುತ್ತಿದ್ದೇನೆ. ಎಲ್ಲಾ ನಮಾಝ್ಗಳ ನಂತರ ಹೀಗೆ ಹೇಳುವುದನ್ನು ಬಿಟ್ಟುಬಿಡಬೇಡ: ಓ ಅಲ್ಲಾಹ್! ನಿನ್ನನ್ನು ಸ್ಮರಿಸಲು, ನಿನಗೆ ಕೃತಜ್ಞತೆ
ಸಲ್ಲಿಸಲು ಮತ್ತು ಉತ್ತಮವಾದ ರೀತಿಯಲ್ಲಿ ನಿನ್ನ ಆರಾಧನೆ ಮಾಡಲು ನನಗೆ ಸಹಾಯ ಮಾಡು."
[صحيح] [رواه أبو داود والنسائي وأحمد]

ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಮುಆದ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರ ಕೈಯನ್ನು ಹಿಡಿದು ಹೇಳಿದರು: "ಓ ಮುಆದ್, ಅಲ್ಲಾಹನಾಣೆ! ಖಂಡಿತವಾಗಿಯೂ ನಾನು ನಿನ್ನನ್ನು ಪ್ರೀತಿಸುತ್ತೇನೆ. ನಾನು ನಿನಗೆ ಉಪದೇಶ ಮಾಡುತ್ತಿದ್ದೇನೆ. ಎಲ್ಲಾ ನಮಾಝ್ಗಳ ನಂತರ ಹೀಗೆ ಹೇಳುವುದನ್ನು ಬಿಟ್ಟುಬಿಡಬೇಡ: ಓ ಅಲ್ಲಾಹ್! ಸತ್ಕರ್ಮಕ್ಕೆ ಹತ್ತಿರಗೊಳಿಸುವ ಎಲ್ಲಾ ಮಾತು ಮತ್ತು ಕರ್ಮಗಳಲ್ಲೂ ನಿನ್ನನ್ನು ಸ್ಮರಿಸಲು ನನಗೆ ಸಹಾಯ ಮಾಡು. ಒಂದು ಹೊಸ ಅನುಗ್ರಹ ಲಭ್ಯವಾಗುವಾಗ ಅಥವಾ ಒಂದು ಆಪತ್ತು ನಿವಾರಣೆಯಾಗುವಾಗ ನಿನಗೆ ಕೃತಜ್ಞತೆ ಸಲ್ಲಿಸಲು ಸಹಾಯ ಮಾಡು. ನಿಷ್ಕಳಂಕವಾಗಿ ಅಲ್ಲಾಹನಿಗೆ ಮತ್ತು ಪ್ರವಾದಿಯವರನ್ನು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಅನುಸರಿಸುತ್ತಾ ಉತ್ತಮ ರೀತಿಯಲ್ಲಿ ಆರಾಧನೆ ಮಾಡಲು ನನಗೆ ಸಹಾಯ ಮಾಡು.

http://www.sunnah.global/hadeeth/kn/show/3518